OS No. 98/2022 PW-**1**

**ದಿನಾಂಕ 15.11.2023 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.**

ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ

ನಾನು ನನ್ನ ಪರ ಸಾಕ್ಷಿಯಾಗಿ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

ದಿನಾಂಕ 31.10.2019 ರ ನೊಂದಾಯಿತ ಸ್ವಾಧೀನ ರಹಿತ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-1(ಎ) ಎಂದು, ಸರ್ವೆ ನಂಬರ್ 198/17 ರ ಆರ್ ಟಿ ಸಿ ಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಲೀಗಲ್ ನೋಟೀಸಿನ ಕಛೇರಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, 3 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-4 ಎಂದು, 3 ನೇ ಪ್ರತಿವಾದಿಗೆ ಕಳುಹಿಸಿ ನೋಟೀಸ್ ಹಿಂದಿರುಗಿದ ಆರ್ ಪಿ ಎ ಡಿ ಕವರ್ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, 1 ನೇ ಪ್ರತಿವಾದಿಗೆ ಸಂಬಂದಿಸಿದ ಅಂಚೆ ಸ್ವೀಕೃತಿ ಪತ್ರವನ್ನು ಹಾಜರುಪಡಿಸಿರುತ್ತೇನೆ ಸದರಿ ದಾಖಲೆಯಲ್ಲಿ ಹೆಬ್ಬಟ್ಟಿನ ಗುರುತು ಇದ್ದು ಯಾರಿಗೆ ಸಂಬಂದಪಟ್ಟ ಹೆಬ್ಬಟ್ಟಿನ ಗುರುತು ಎಂದು ನಮೂದಿಸಿಲ್ಲ ಸದರಿ ದಾಖಲೆಯನ್ನು ನಿಪಿ-6 ಎಂದು ಗುರುತಿಸಲಾಯಿತು.

ಸಮಯಾವಕಾಶ ಕೋರಿದ್ದರಿಂದ ಮುಂದುವರೆದ ಮುಖ್ಯವಿಚಾರಣೆಯನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

(ಶುಭಾ)
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.